**<u>ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಸೇಡಂ.</u>**

**<u>ಸಿಸಿ ನಂ.2046/2021</u>**

ಫಿರ್ಯಾದಿಃ ಕರ್ನಾಟಕ ಸರಕಾರ ಪರಃ ಸೇಡಂ ಪೊಲೀಸ್ ಠಾಣೆ,

-ಃಃ ವಿರುದ್ದ ಃಃ-

ಆರೋಪಿ ಃ. ಅಶೋಕ ತಂದೆ ಶಾಮರಾವ ಪಾಟೀಲ್
ವಃ 24 ವರ್ಷ, ಉಃ ವಾಟರ ಸರ್ವಿಸಿಂಗ ಕೆಲಸ
ಸಾಃ ವಿದ್ಯಾನಗರ ಸೇಡಂ

----

**<u>ದೋಷಾರೋಪಣೆ</u>**

ನಾನು **ಶ್ರೀ ಬಾಲು**, ಬಿಎ.,ಎಲ್.ಎಲ್.ಬಿ., ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರು, ಸೇಡಂ, ನಿಮ್ಮ ಮೇಲೆ ಹೊರಿಸುವ ಆರೋಪವೇನೆಂದರೆ,

ದಿನಾಂಕ 10-08-2021 ರಂದು ಬೆಳಿಗ್ಗೆ 11-30 ಗಂಟೆ ಸುಮಾರಿಗೆ ಸೇಡಂ ಪೊಲೀಸ ಠಾಣಾ ವ್ಯಾಪ್ತಿಯಲ್ಲಿ ಬರುವ ಸೇಡಂದಿಂದ ಉಡಗಿ ಗ್ರಾಮಕ್ಕೆ ಹೋಗುವ ಮುಖ್ಯ ರಸ್ತೆಯಲ್ಲಿ ಗುಂಪಾ ಕ್ರಾಸ್ ಹತ್ತಿರ ಚಾಸಾ.1 ನೆದ್ದವನು ಸೇಡಂದಿಂದ ತನ್ನ ಮೋಟಾರ ಸೈಕಲ ಮೇಲೆ ಉಡಗಿ ಗ್ರಾಮಕ್ಕೆ ಹೋಗುತ್ತಿದ್ದಾಗ ಮಾರ್ಗ ಮದ್ಯದಲ್ಲಿ ಗುಂಪಾ ಕ್ರಾಸ್ ಹತ್ತಿರ ಆರೋಪಿತನು ಚಾಸಾ.1 ನೆದ್ದವನಿಗೆ ರಸ್ತೆಯಲ್ಲಿ ಅಡ್ಡ ಬಂದು ತಡೆದು ನಿಲ್ಲಿಸಿದ್ದು, ಆ ಮೂಲಕ ಆರೋಪಿತರಾದ ನೀವು ಭಾ.ದಂ.ಸಂ.ಕಲಂ 341 ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧಗಳನ್ನು ಮಾಡಿರುತ್ತೀರಿ, ಅದು ನನ್ನ ಸಂಜ್ಞೆತೆಗೆ ಬಂದಿರುತ್ತದೆ.

ಎರಡನೆಯದಾಗಿ ಮೇಲೆ ಹೇಳಲಾದ ದಿನ ಸಮಯ ಮತ್ತು ಸ್ಥಳದಲ್ಲಿ ಆರೋಪಿತನು, ಚಾಸಾ.1 ನೆದ್ದವನಿಗೆ ತಡೆದು ನಿಲ್ಲಿಸಿ, ಅವಾಚ್ಯ ಶಬ್ದಗಳಿಂದ ಬೈಯುತ್ತಾ, ಚಾಸಾ.1 ನೆದ್ದವನಿಗೆ ಎದೆಯ ಮೇಲಿನ ಅಂಗಿ ಹಿಡಿದು ಎಳೆದಾಡಿ ಕುಸ್ತಿಗೆ ಬಿದ್ದು ಕೈಯಿಂದ ಹೊಟ್ಟೆಗೆ ಬೆನ್ನಿಗೆ ಇತರಕಡೆ ಹೊಡೆ ಬಡೆ ಮಾಡಿ ಕೆಳಗಡೆ ಹಾಕಿ ಕಾಲಿನಿಂದ ಒದ್ದು ಗುಪ್ತಗಾಯ ಪಡಿಸಿದ್ದು, ಆ ಮೂಲಕ ಆರೋಪಿತರಾದ ನೀವು ಭಾ.ದಂ.ಸಂ. ಕಲಂ 323 ರಡಿಯಲ್ಲಿ ಶಿಕ್ಷಾರ್ಹ ಅಪರಾಧಗಳನ್ನು ಮಾಡಿರುತ್ತೀರಿ, ಅದು ನನ್ನ ಸಂಜ್ಞೆತೆಗೆ ಬಂದಿರುತ್ತದೆ.

ಮೂರನೆಯದಾಗಿ ಮೇಲೆ ಹೇಳಲಾದ ದಿನ ಸಮಯ ಮತ್ತು ಸ್ಥಳದಲ್ಲಿ ಆರೋಪಿತನು, ಚಾಸಾ.01 ನೇದ್ದವನಿಗೆ ಭೋಸಡಿ ಮಗನೆ ಮಯ್ಯಾ ಎಲ್ಲಿಗೆ ಹೋಗುತಿದ್ದಿ ನಿನಗೆ ಸೊಕ್ಕು ಬಂದಿದೆ ನೀನು ನಮ್ಮ ತಂಗಿಗೆ ಮದುವೆ ಮಾಡಿಕೊಂಡು ಅವಳಿಗೆ ಹೊಡೆ ಬಡೆ ಮಾಡಿ ತವರು ಮನೆಗೆ ಕಳುಹಿಸಿ ನೀನು ಇನ್ನೊಂದು ಮದುವೆ ಮಾಡಿಕೊಳ್ಳುತಿ ನಿನ್ನಿಂದ ನಮ್ಮ ತಂಗಿ ಬಾಳು ಹಾಳಾಗಿದೆ ಮಗನೆ ಅಂತಾ ಅವಾಚ್ಯವಾಗಿ ಬೈದು ಸಾರ್ವಜನಿಕ ಶಾಂತತೆಗೆ ಭಂಗ ಉಂಟು ಮಾಡಿದ್ದು ಆ ಮೂಲಕ ಆರೋಪಿತರಾದ

ನೀವು ಭಾ.ದಂ.ಸಂ.ಕಲಂ 504 ರಡಿಯಲ್ಲಿ ಶಿಕ್ಷಾರ್ಹ ಅಪರಾಧಗಳನ್ನು ಮಾಡಿರುತ್ತೀರಿ, ಅದು ನನ್ನ ಸಂಜ್ಞೆತೆಗೆ ಬಂದಿರುತ್ತದೆ.

ಕೊನೆಯದಾಗಿ ಮೇಲೆ ಹೇಳಲಾದ ದಿನ, ಸಮಯ ಮತ್ತು ಸ್ಥಳದಲ್ಲಿ ಆರೋಪಿತನು, ಚಾಸಾ.1 ರವರಿಗೆ ಇವತ್ತು ನಿನಗೆ ಬಿಡುವುದಿಲ್ಲಾ ಏನಾದರೂ ಆಗಲಿ ನಿನಗೆ ಹೊಡೆದು ಕೊಲೆ ಮಾಡುತ್ತೇನೆ ಅಂತಾ ಹಾಗೂ ಆರೋಪಿತನು ಹೋಗುವಾಗ ಚಾಸಾ.1 ರವರಿಗೆ ಬೋಸಡಿ ಮಗನೆ ಇವತ್ತು ಉಳಿದುಕೊಂಡಿದ್ದಿ ಇನ್ನೊಮ್ಮೆ ನನ್ನ ಕೈಯಲ್ಲಿ ಸಿಕ್ಕರೆ ನಿನಗೆ ಜೀವಂತ ಬಿಡುವುದಿಲ್ಲಾ ಹೊಡೆದು ಕೊಲೆ ಮಾಡುವುದಾಗಿ ಜೀವದ ಬೆದರಿಕೆ ಹಾಕಿದ್ದು, ನೀವು ಭಾ.ದಂ.ಸಂ.ಕಲಂ 506 ರಡಿಯಲ್ಲಿ ಶಿಕ್ಷಾರ್ಹ ಅಪರಾಧಗಳನ್ನು ಮಾಡಿರುತ್ತೀರಿ, ಅದು ನನ್ನ ಸಂಜ್ಞೆತೆಗೆ ಬಂದಿರುತ್ತದೆ.

ಕಾರಣ ಮೇಲೆ ಹೇಳಿದ ಅಪರಾಧಗಳಿಗಾಗಿ ವಿಚಾರಣೆ ಎದುರಿಸಬೇಕೆಂದು ನಿರ್ದೇಶಿಸುತ್ತಿದ್ದೇನೆ.

ಸಹಿ/-

ದಿನಾಂಕಃ 17-12-2025 ಪ್ರ.ದ.ನ್ಯಾ.ದಂ. ಸೇಡಂ.

**ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಸೇಡಂ.**

**ಸಿಸಿ ನಂ.2046/2021**

ಫಿರ್ಯಾದಿಃ ಕರ್ನಾಟಕ ಸರಕಾರ ಪರಃ ಸೇಡಂ ಪೊಲೀಸ್ ಠಾಣೆ,

-ಃಃ ವಿರುದ್ದ ಃಃ-

ಆರೋಪಿ ಃ ಅಶೋಕ ತಂದೆ ಶಾಮರಾವ ಪಾಟೀಲ್
ವಃ 24 ವರ್ಷ, ಉಃ ವಾಟರ ಸರ್ವಿಸಿಂಗ ಕೆಲಸ
ಸಾಃ ವಿದ್ಯಾನಗರ ಸೇಡಂ

**ಆರೋಪಿತರ ಹೇಳಿಕೆ**

ಪ್ರಃ-1) ಈ ಓದಿ ಹೇಳಲಾದ ದೋಷಾರೋಪಣೆಯನ್ನು ಕೇಳಿ ತಿಳಿದುಕೊಂಡಿರುವಿರಾ?

ಉಃ-

ಪ್ರಃ-2) ನಿಮ್ಮ ತಪ್ಪನ್ನು ಒಪ್ಪಿಕೊಳ್ಳುತ್ತಿರೊ ಅಥವಾ ವಿಚಾರಣೆ ನಡೆಯಬೇಕಾ?

ಉಃ-

(ದೋಷಾರೋಪಣೆಯನ್ನು ಆರೋಪಿತರಿಗೆ ಓದಿ ಹೇಳಿದ್ದು, ಅವರು ನೀಡಿದ ಹೇಳಿಕೆಯನ್ನು ಯಥಾವತ್ತಾಗಿ ದಾಖಲಿಸಿದ್ದು, ಅದು ಸಂಪೂರ್ಣ ಸತ್ಯವಾಗಿರುತ್ತದೆಂದು ಪ್ರಮಾಣೀಕರಿಸುತ್ತೇನೆ)

ಸಹಿ/-

ದಿನಾಂಕಃ 17-12-2025 ಪ್ರ.ದ.ನ್ಯಾ.ದಂ. ಸೇಡಂ.